# ಶೀಬಾರದಲ್ಲಿ ರಥೋತ್ಸವ ಸುದ್ದಿ

ಚಿತ್ರದುರ್ಗ, ಮಾ. 2 - ನಗರಕ್ಕೆ ಸಮೀಪದ ಶೀಬಾರದಲ್ಲಿ ಶ್ರೀ ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಪ್ರತಿವರ್ಷ ನಡೆಸಿಕೊಂಡು ಬರಲಾಗುತ್ತಿರುವ ಶ್ರೀ ಜಗದ್ಗುರು ಗುರುಪಾದ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಹಾಗು ಶ್ರೀ ಮೈಲಾರಲಿಂಗೇಶ್ವರ ಸ್ವಾಮಿಯ 67ನೇ ವರ್ಷದ ರಥೋತ್ಸವ ನಡೆಯಿತು.

ಡಾ. ಶಿವಮೂರ್ತಿ ಮುರುಘಾ ಶರಣರು, ಎಸ್.ಜೆ.ಎಂ. ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ. ಪರಮಶಿವಯ್ಯ, ಪ್ರಕಾಶ್, ಗ್ರಾ.ಪಂ. ಸದಸ್ಯರು, ಗುತ್ತಿನಾಡು, ಶೀಬಾರ ಇನ್ನಿತರೆ ಸುತ್ತಮುತ್ತಲಿನ ಗ್ರಾಮಸ್ಥರು ರಥೋತ್ಸವದಲ್ಲಿ ಭಾಗವಹಿಸಿದ್ದರು.

ದಿ. 03-03-2022ರಿಂದ ದಿ. 17-03-2022ರವರೆಗೆ ಭಾರಿ ದನಗಳ ಜಾತ್ರೆ ನಡೆಯಲಿದ್ದು, ರಾಜ್ಯದ ವಿವಿಧ ಭಾಗಗಳಿಂದ ಹಾಗು ತಮಿಳುನಾಡು, ಆಂಧ್ರಪ್ರದೇಶದಿಂದ ಹಳ್ಳಿಕಾರ್, ಅಮೃತಮಹಲ್, ಸಣ್ಣಮಲ್ಲಿಗೆ, ಗುಜುಮಾವು, ನಾಟಿ ಸೇರಿದಂತೆ ವಿವಿಧ ತಳಿಯ ರಾಸುಗಳು ಸೇರಲಿದ್ದು, ಸುತ್ತಮುತ್ತಲ ಜಿಲ್ಲೆಗಳ ರೈತರು ತಮ್ಮ ರಾಸುಗಳೊಂದಿಗೆ ಪಾಲ್ಗೊಂಡು ಸದುಪಯೋಗ ಪಡೆಯಬೇಕೆಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.